# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 390 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಎಂ. ನಾಗರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 19.02.2024 |
| ಉತ್ತರಿಸುವ ಸಚಿವರು | : | ಮಾನ್ಯ ಉನ್ನತ ಶಿಕ್ಷಣ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯ ಸರ್ಕಾರವು ಮೆಟ್ರೋ ನಗರಗಳಲ್ಲಿ ಹೊಸ ಇಂಜಿನಿಯರಿಂಗ್ ಕಾಲೇಜುಗಳ ಸ್ಥಾಪನೆಗೆ ವಿರೋಧ ವ್ಯಕ್ತಪಡಿಸಿದೆಯೇ; ಹಾಗಿದ್ದಲ್ಲಿ ಯಾವ ಕಾರಣಕ್ಕಾಗಿ ಹೊಸ ಇಂಜಿನಿಯರಿಂಗ್ ಕಾಲೇಜುಗಳ ಸ್ಥಾಪನೆಗೆ ವಿರೋಧ ವ್ಯಕ್ತಪಡಿಸಲಾಗಿದೆ; | ಇಲ್ಲ. |
| ಆ | ಗ್ರಾಮೀಣ ಪ್ರದೇಶದಲ್ಲಿರುವ ಇಂಜಿನಿಯರಿಂಗ್ ಕಾಲೇಜುಗಳ ಪುನಚ್ಚೇತನಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು ಗ್ರಾಮೀಣ ಪ್ರದೇಶದ ಇಂಜಿನಿಯರಿಂಗ್ ಕಾಲೇಜುಗಳ ಪ್ರವೇಶಾತಿ ಕಡಿಮೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಹಾಗಿದ್ದಲ್ಲಿ ಇಂತಹ ಸಮಸ್ಯೆಯನ್ನು ಪರಿಹಾರ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಹೌದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br><br>ರಾಜ್ಯದಲ್ಲಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಅತ್ಯುನ್ನತ ಗುಣಮಟ್ಟದ ತಾಂತ್ರಿಕ ಬೋಧನೆ-ಕಲಿಕೆಗಳಿಗೆ ಹಾಗೂ ಸಂಶೋಧನೆಯನ್ನು ಉತ್ತೇಜಿಸಲು ರಾಜ್ಯದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಹಾಸನ, ಹಾವೇರಿ, ಕೆ.ಆರ್. ಪೇಟೆ, ರಾಮನಗರ, ತಳಕಲ್, ಕಾರವಾರ ಮತ್ತು ಎಸ್ ಕೆಎಸ್ ಜೆಟಿಐ ಬೆಂಗಳೂರಿನಲ್ಲಿ ಐಐಟಿ ಮಾದರಿಯಲ್ಲಿ "Karnataka institute of Technology (KIT)" ಗಳನ್ನಾಗಿ ಉನ್ನತ್ತೀಕರಿಸಲು ಗುರುತಿಸಲಾಗಿದೆ. ಹಾಗೂ ಯೋಜನಾ ಅನುಷ್ಠಾನಕ್ಕೆ ಶೈಕ್ಷಣಿಕ ತಜ್ಞರ ಕಾರ್ಯಪಡೆಯನ್ನು ರಚಿಸಿ ಆದೇಶಿಸಲಾಗಿದ್ದು, ಸಮಿತಿಯ ಕಾರ್ಯವ್ಯಾಪ್ತಿಯನ್ನು ನಿಗದಿಪಡಿಸಲಾಗಿರುತ್ತದೆ. ಪ್ರಸ್ತುತ ಸದರಿ ಸಂಸ್ಥೆಗಳ ಸಾಂಸ್ಥಿಕ ಅಭಿವೃದ್ಧಿ ಕ್ರಿಯಾ ಯೋಜನೆಯನ್ನು ಸಿದ್ದಪಡಿಸಿ ಕ್ರಿಯಾಯೋಜನೆಯ ಅನುಮೋದನೆ ದೊರೆತಿದ್ದು ಸದರಿ ಕಾರ್ಯಕ್ರಮಕ್ಕೆ 2022-23 ನೇ ಸಾಲಿಗೆ ರೂ.2100.00 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ. ಮತ್ತು ಬೆಂಗಳೂರಿನ ಎಸ್.ಕೆ.ಎಸ್.ಜೆ.ಟಿ ಇಂಜಿನಿಯರಿಂಗ್ ಕಾಲೇಜಿನಲ್ಲಿರುವ ಜವಳಿ ತಂತ್ರಜ್ಞಾನ ವಿಭಾಗವನ್ನು Smart and Technical Textile |

| | | |
|---|---|---|
| | | Centre ಆಗಿ ಉನ್ನತೀಕರೀಸಲು ಕ್ರಮವಹಿಸಲಾಗುತ್ತಿದೆ. |
| ಇ | ರಾಜ್ಯದಲ್ಲಿ ಮಹಿಳೆಯರು ಉನ್ನತ ಶಿಕ್ಷಣ ವ್ಯಾಸಂಗ ಮಾಡಲು ಹಿಂದೇಟು ಹಾಕುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಸಮಸ್ಯೆಯನ್ನು ಪರಿಹರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು | ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.<br><br>ರಾಜ್ಯದಲ್ಲಿ ಮಹಿಳೆಯರು ಗಣನೀಯ ಪ್ರಮಾಣದಲ್ಲಿ ಉನ್ನತ ವ್ಯಾಸಂಗ ಕೈಗೊಳ್ಳುತ್ತಿದ್ದು, ಇದರಿಂದಾಗಿ ಮಹಿಳೆಯರ ಉನ್ನತ ವ್ಯಾಸಂಗದಲ್ಲಿ ಯಾವುದೇ ರೀತಿಯ ಸಮಸ್ಯೆಗಳು ಉಂಟಾಗಿರುವುದಿಲ್ಲ. |

**(ಸಂ: ಇಡಿ 64 ಟಿಇಸಿ 2024)**

**(ಡಾ. ಎಂ.ಸಿ. ಸುಧಾಕರ್)**
ಉನ್ನತ ಶಿಕ್ಷಣ ಸಚಿವರು